**<u>ಸಾಕ್ಷಿಗೆ ದಿನಾಂಕ 25.09.2025 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀ.ಸಿ.ಬಿ.ಕೆ. ವಕೀಲರಿಂದ:</u>**

1. ನಾನು ಅರ್ಜಿದಾರರ ಪರ ಸಾಕ್ಷಿದಾರನಾಗಿದ್ದು. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ:

| | |
|---|---|
| ನಿ.ಪಿ 18 | ಅಧಿಕಾರ ಪತ್ರ |
| ನಿ.ಪಿ 19 | ಎಂಎಲ್‌ಸಿ ಎಕ್ಸ್‌ಟ್ರಾಕ್ಟ್ ನ ದೃಡೀಕೃತ ಪ್ರತಿ |
| ನಿ.ಪಿ 20 | ಕೇಸ್ ಶೀಟ್ |

**<u>ಪಾಟೀ ಸವಾಲು: 1 ಮತ್ತು 2ನೇ ಎದುರುದಾರರ ಪರ ಶ್ರೀಮತಿ ಎಸ್.ಕೆ.ಆರ್ ವಕೀಲರಿಂದ:</u>**

ದಾಖಲೆಗಳಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಿಪಿ.19 ನ್ನು ಬರೆದಿರುತ್ತಾರೆ. ಅರ್ಜಿದಾರರಿಗೆ ಯಾವ ಚಿಕಿತ್ಸೆ ನೀಡಲಾಗಿದೆ ಎಂದು ನನಗೆ ಗೊತ್ತಿಲ್ಲ. ಅರ್ಜಿದಾರರಿಗೆ ಚಿಕಿತ್ಸೆ ನೀಡಿದ ವೈದ್ಯರು ಈಗಲೂ ತಮ್ಮ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ದಾಖಲೆಗಳನ್ನು ಸೃಷ್ಟಿಸಿ ಹಾಜರು ಮಾಡಿ, ಸುಳ್ಳು ಸಾಕ್ಷ್ಯ ನುಡಿಯುದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ: ಇಲ್ಲ.</u>**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**